Akashvani : Bangalore
Regional Bulletin In Kannada
24.02.2026 / 14.30  hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದ ಅಗ್ನಿಶಾಮಕ, ತುರ್ತು ಸೇವೆಗಳ ಅಧಿಕಾರಿ, ಸಿಬ್ಬಂದಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ
- ಮಹದೇಶ್ವರ ಬೆಟ್ಟದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ಶೀಘ್ರದಲ್ಲಿ ಪೂರ್ಣ; ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಉದ್ಘಾಟನೆ
- ರಾಜ್ಯದ ಪ್ರಸ್ತುತ ಆರ್ಥಿಕ ಪರಿಸ್ಥಿತಿ ಕುರಿತು ಶ್ವೇತಪತ್ರ ಹೊರಡಿಸಲು ವಿಪಕ್ಷ ನಾಯಕ ಆರ್.ಅಶೋಕ ಆಗ್ರಹ
- ಯುವಜನತೆಯಲ್ಲಿ ಪುಸ್ತಕ ಸಂಸ್ಕೃತಿ ಭಿತ್ತುವ ಉದ್ದೇಶದ 'ಮನೆಗೊಂದು ಗ್ರಂಥಾಲಯ' ಕಾರ್ಯಕ್ರಮ ಆಯೋಜನೆ

<><*<><>*><>

ರಾಜ್ಯದ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಗೃಹ ರಕ್ಷಕ ದಳ, ಪೌರರಕ್ಷಣೆ ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆ, ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಇಂದು ಮುಖ್ಯಮಂತ್ರಿಗಳ ಪದಕ ಪ್ರದಾನ ಮಾಡಲಾಯಿತು.  ಬೆಂಗಳೂರಿನ ಆರ್.ಎ.ಮುಂಡ್ಕುರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡೆಮಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಗೌರವ ವಂದನೆ ಸ್ವೀಕರಿಸಿ ಪದಕ ಪ್ರದಾನ ಮಾಡಿದರು. ಇದೇ ಸಂದರ್ಭದಲ್ಲಿ ೪೦ ಹೊಸ ಅಗ್ನಿಶಾಮಕ ಜಲ ವಾಹನಗಳನ್ನು ಹಸ್ತಾಂತರಿಸಿದರು. ಬಳಿಕ ಮಾತನಾಡಿದ ಡಾ.ಜಿ.ಪರಮೇಶ್ವರ್, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯು ಉತ್ತಮ ಕೆಲಸದ ಮೂಲಕ ರಾಷ್ಟ್ರ ಮಟ್ಟದಲ್ಲಿ ಜನಮನ್ನಣೆ ಪಡೆದಿದೆ ಎಂದು ಹೇಳಿದರು. ಅಗ್ನಿಶಾಮಕ ಮತ್ತು ತುರ್ತುಸೇವಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಶಿಸ್ತಿನ ಸಿಪಾಯಿಗಳಾಗಿದ್ದು, ಪೊಲೀಸ್ ಇಲಾಖೆಯ ಜೊತೆಜೊತೆಯಾಗಿ ಕೆಲಸ ಮಾಡುತ್ತಿದ್ದು, ಇಡೀ ದೇಶದಲ್ಲಿ ಕರ್ನಾಟಕ ಅಗ್ನಿಶಾಮಕ ಮತ್ತು ಇತರೆ ಇಲಾಖೆಗಳು ಮಾದರಿಯಾಗಿದೆ ಎಂದರು.

<><*<><>*><>

ರಾಜ್ಯದ ಪ್ರಮುಖ ಧಾರ್ಮಿಕ ಸ್ಥಳವಾದ ಮಲೆ ಮಹದೇಶ್ವರ ಬೆಟ್ಟಕ್ಕೆ ಬರುವ ಭಕ್ತಾದಿಗಳ ಅನುಕೂಲಕ್ಕಾಗಿ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಶೀಘ್ರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ ಎಂದು ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಹನೂರು ತಾಲೂಕು ಮಲೆ ಮಹದೇಶ್ವರ ಬೆಟ್ಟದ ಆವರಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ವೀಕ್ಷಿಸಿ ಮಾತನಾಡಿದ ಅವರು, ತಿರುಪತಿ ಮಾದರಿಯಲ್ಲಿ ಕ್ಯೂ ಲೈನ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ. ಇದರಿಂದ ಭಕ್ತಾದಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದರು. ಕ್ಯೂ ಲೈನ್ ನಲ್ಲಿ ಶೌಚಾಲಯ, ಶುದ್ಧ ಕುಡಿಯುವ ನೀರು, ಸೇರಿದಂತೆ ಮತ್ತಿತರರ ಮೂಲಭೂತ ಸೌಕರ್ಯ ವ್ಯವಸ್ಥೆ ಮಾಡಲಾಗಿದೆ. ೬೦ ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ದಾಸೋಹ ಭವನ ನಿರ್ಮಾಣ ಮಾಡಲು ಈಗಾಗಲೇ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

<><*<><>*><>

ರಾಜ್ಯದಲ್ಲಿ ಕಳೆದ ೨ ವರ್ಷದಲ್ಲಿ ಯಾವುದೇ ನೇಮಕಾತಿ ನಡೆದಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ ಆರೋಪಿಸಿದ್ದಾರೆ. ಧಾರವಾಡದಲ್ಲಿಂದು ಖಾಲಿ ಹುದ್ದೆಗಳ ನೇಮಕಾತಿಗೆ ಆಗ್ರಹಿಸಿ ನಡೆದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸರ್ಕಾರ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿದ್ದು, ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚಾಗಿದೆ ಎಂದು ದೂರಿದರು. ರಾಜ್ಯದ ಪ್ರಸ್ತುತ ಆರ್ಥಿಕ ಪರಿಸ್ಥಿತಿ ಕುರಿತು ಶ್ವೇತಪತ್ರ ಹೊರಡಿಸಬೇಕು ಎಂದು ಅವರು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕ ಅರವಿಂದ ಬೆಲ್ಲದ ಸೇರಿದಂತೆ ಮತ್ತಿತರರ ನಾಯಕರು ಉಪಸ್ಥಿತರಿದ್ದರು.

<><*<><>*><>

ಮೈಸೂರಿನ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ನೂತನ ಕುಲಪತಿಗಳಾಗಿ ಪ್ರೊಫೆಸರ್ ಕೆ.ರಾಮಕೃಷ್ಣಯ್ಯ ಇಂದು ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು. ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕಿನವರಾದ ಇವರು, ನೀನಾಸಂ ಪದವೀಧರರು. ಬೆಂಗಳೂರು ಪ್ರದರ್ಶನ ಕಲಾ ವಿಭಾಗದಿಂದ ಸ್ನಾತಕೋತ್ತರ, ಪಿಹೆಚ್‌ಡಿ ಪದವಿ ಪಡೆದಿದ್ದಾರೆ. ಬಳಿಕ ವಿಶ್ವವಿದ್ಯಾಲಯದಲ್ಲಿ ೨೫ ವರ್ಷಗಳ ಸುದೀರ್ಘ ಬೋಧನಾ ಅನುಭವ ಹೊಂದಿದ್ದಾರೆ. ಇವರ ಮಾರ್ಗದರ್ಶನದಲ್ಲಿ ೧೭ ಸಂಶೋಧಕರು ಪಿಎಚ್.ಡಿ ಪದವಿ ಪಡೆದಿದ್ದು, ರಂಗಭೂಮಿ ಕುರಿತಾದ ಅನೇಕ ಸಂಶೋಧನಾ ಕೃತಿ ಹಾಗೂ ನಾಲ್ಕು ನಾಟಕಗಳನ್ನು ರಚಿಸಿ ಪ್ರಕಟಿಸಿದ್ದಾರೆ.

<><*<><>*><>

ಭಾರತ ಸರ್ಕಾರದ ವಾರ್ತಾ ಶಾಖೆ-ಪಿಐಬಿ ಬೆಂಗಳೂರು ಮತ್ತು ಉಡುಪಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಇಂದು ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು 'ವಾರ್ತಾಲಾಪ' ಮಾಧ್ಯಮ ಪ್ರತಿನಿಧಿಗಳಿಗೆ ಕಾರ್ಯಾಗಾರ ಆಯೋಜಿಸಲಾಗಿತ್ತು. ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಸಂಸದ ಕೋಟ ಶ್ರೀನಿವಾಸ ಪೂಜಾರಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಈ ಕಾರ್ಯಾಗಾರ ಹೆಚ್ಚು ಸಹಕಾರಿಯಾಗಿದೆ ಎಂದರು.

ಧ್ವನಿ: ಕೋಟಾ ಶ್ರೀನಿವಾಸ ಪೂಜಾರಿ ( ೧೫ ಸೆಕೆಂಡ್ಸ್)

ಕಾರ್ಯಕ್ರಮದ ಪ್ರಾರಂಭದಲ್ಲಿ ಭಾರತ ಸರ್ಕಾರದ ವಾರ್ತಾ ಶಾಖೆಯ ಸಹಾಯಕ ನಿರ್ದೇಶಕ ಮಧು.ಎಂ, ಪ್ರಾಸ್ತಾವಿಕವಾಗಿ ಮಾತನಾಡಿದರು.

<><*<><>*><>

ಯುವ ಜನತೆಯನ್ನು ಪುಸ್ತಕಗಳತ್ತ ಆಕರ್ಷಿಸಲು 'ಅಂಗಳದಲ್ಲಿ ತಿಂಗಳ ಪುಸ್ತಕ ಹಾಗೂ ಮನೆಗೊಂದು ಗ್ರಂಥಾಲಯ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಮಾನಸ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ನಡೆದ ಕನ್ನಡ ಪುಸ್ತಕ ಪ್ರಾಧಿಕಾರದ ಯೋಜನೆ "ಮನೆಗೊಂದು ಗ್ರಂಥಾಲಯ" ಕರಪತ್ರ ಬಿಡುಗಡೆ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಜಾಗೃತ ಸಮಿತಿ ಸದಸ್ಯರಿಗೆ ನೇಮಕಾತಿ ಪತ್ರ ವಿತರಿಸಿ ಅವರು ಮಾತನಾಡಿದರು. ಯುವಜನತೆಯಲ್ಲಿ ಪುಸ್ತಕ ಸಂಸ್ಕೃತಿ ಭಿತ್ತಬೇಕು ಎಂಬ ಉದ್ದೇಶದಿಂದ 'ಮನೆಗೊಂದು ಗ್ರಂಥಾಲಯ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಈಗಾಗಲೇ ೩೦ ಜಿಲ್ಲೆಗಳಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಮಾತ್ರ ಬಾಕಿ ಇದೆ ಎಂದು ಅವರು ಹೇಳಿದರು. ಕನ್ನಡಿಗರಲ್ಲಿ ಪುಸ್ತಕ ಓದುವ ಸಂಸ್ಕೃತಿ ಹೆಚ್ಚಿದ್ದು, ಇದನ್ನು ಮತ್ತಷ್ಟು ವಿಸ್ತರಿಸಲು ಪುಸ್ತಕ ಪ್ರಾಧಿಕಾರ ಮುಂದಾಗಿದೆ. ಜ್ಞಾನಾಲಯವನ್ನು ಬಿತ್ತಲು ಪ್ರಯತ್ನಿಸಲಾಗುತ್ತಿದೆ ಎಂದು ಅವರು ತಿಳಿಸಿದರು. 'ಪ್ರತೀ ಮನೆಯಲ್ಲೂ ಪೂಜಾ ಕೊಠಡಿ ಇರುವಂತೆ ಗ್ರಂಥಾಲಯ ಭಂಡಾರವು ಸಹ ಇದ್ದಲ್ಲಿ, ಇಡೀ ಕುಟುಂಬದ ಜ್ಞಾನಾರ್ಜನೆ ಹೆಚ್ಚಲಿದೆ. ರಾಜ್ಯದಲ್ಲಿ ಒಂದು ಲಕ್ಷ ಮನೆಗಳಲ್ಲಿ ಗ್ರಂಥಾಲಯ ಭಂಡಾರ ಸ್ಥಾಪಿಸಲಾಗುತ್ತದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಇಂದು ಗುರು ರಾಘವೇಂದ್ರ ಸ್ವಾಮಿಯವರ ೪೩೧ನೇ ವರ್ಧಂತಿ ಮಹೋತ್ಸವ. ಈ ಹಿನ್ನೆಲೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ನಾಡಿನ

ಸಮಸ್ತ ಜನತೆಯ ಸುಖ, ಶಾಂತಿ ಮತ್ತು ಸಮೃದ್ಧಿಗಾಗಿ ಗುರು ರಾಯರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸುವುದಾಗಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><*<><>*><>

ಪ್ರಸ್ತುತ ತಾಂತ್ರಿಕ ಜಗತ್ತಿನ ಕೈಗಾರಿಕೆಗಳಲ್ಲಿ ಸೆಮಿ ಕಂಡಕ್ಟರ್‌ಗಳು ಅತ್ಯಂತ ಮಹತ್ವದ ಸ್ಥಾನ ಪಡೆದಿವೆ ಎಂದು ದಾವಣಗೆರೆ ಬಿಐಇಟಿ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಎಚ್.ಬಿ.ಅರವಿಂದ್ ಅಭಿಪ್ರಾಯಪಟ್ಟಿದ್ದಾರೆ. ಸೆಮಿ ಕಂಡಕ್ಟರ್ ವಿಷಯ ಕುರಿತು ಆಯೋಜಿಸಿರುವ ಒಂದು ವಾರದ ವಿದ್ಯಾರ್ಥಿ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾವಿಂದು ಕೃತಕ ಬುದ್ಧಿಮತ್ತೆ ಯುಗದಲ್ಲಿದ್ದೀವೆ. ಈ ಕ್ಷೇತ್ರದಲ್ಲಿ ವಿಶ್ವವೇ ಭಾರತದತ್ತ ನೋಡುವಂತಹ ವಾತಾವರಣ ನಿರ್ಮಾಣವಾಗುತ್ತಿದ್ದು, ಪೀಳಿಗೆಯಿಂದ ಪೀಳಿಗೆಗೆ ಎಲೆಕ್ಟ್ರಾನಿಕ್ ಸಾಧನಗಳಲ್ಲಿ ಆಗುತ್ತಿರುವ ಕ್ರಾಂತಿಕಾರಿ ಬದಲಾವಣೆಗಳನ್ನು ವಿದ್ಯಾರ್ಥಿಗಳು ಸೂಕ್ಷ್ಮವಾಗಿ ಗಮನಿಸಬೇಕು ಎಂದು ಸಲಹೆ ನೀಡಿದರು.

<><*<><>*><>

ವಿಜಯನಗರ ಜಿಲ್ಲೆಯಾದ್ಯಂತ ಬೆಂಬಲ ಬೆಲೆ ಯೋಜನೆಯಡಿ ಇದೇ ೨೯ ರಿಂದ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳು ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು ೪ ಖರೀದಿ ಕೇಂದ್ರ ಸ್ಥಾಪಿಸಲಾಗಿದ್ದು, ಸಹಕಾರ ಮಾರಾಟ ಮಹಾಮಂಡಳಿ ವತಿಯಿಂದ ಪ್ರತಿ ಕ್ವಿಂಟಾಲ್‌ಗೆ ೫ ಸಾವಿರದ ೮೭೫ ರೂಪಾಯಿಯಂತೆ ರೈತರಿಂದ ಪ್ರತಿ ಎಕರೆಗೆ ೪ ಕ್ವಿಂಟಾಲ್ ನಂತೆ ಗರಿಷ್ಟ ೪೦ ಕ್ವಿಂಟಾಲ್ ಉತ್ಪನ್ನವನ್ನು ಖರೀದಿಸಲಾಗುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಬೆಂಬಲ ಬೆಲೆ ಯೋಜನೆ ಪಡೆಯಲು ಇದೇ ೨೯ ರಿಂದ ೮೦ ದಿನಗಳ ಒಳಗಾಗಿ ನೊಂದಾಯಿಸಕೊಳ್ಳಬೇಕು. ತದನಂತರ ಪ್ರತಿದಿನ ಬೆಳಿಗ್ಗೆ ೯ ರಿಂದ ಸಂಜೆ ೫ಗಂಟೆಯವರೆಗೆ ೯೦ ದಿನಗಳವರೆಗೆ ಉತ್ಪನ್ನ ಖರೀದಿಸಲಾಗುವುದು ಎಂದು ತಿಳಿಸಿದ್ದಾರೆ. ಬೆಂಬಲಬೆಲೆ ಯೋಜನೆಯಡಿ ಗುಣಮಟ್ಟದ ಕಡಲೆಕಾಳು ಖರೀದಿಗೆ ಮತ್ತು ನೊಂದಣಿಗಾಗಿ ಜಿಲ್ಲೆಯ ಕೋಗಳಿ, ಹರಪನಹಳ್ಳಿ, ಹಿರೇಹಡಗಲಿ ಮತ್ತು ಹಗರಿಬೊಮ್ಮನಹಳ್ಳಿಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ರೈತರು ನೋಂದಣಿ ಮತ್ತು ಖರೀದಿಗಾಗಿ ಪ್ರಸಕ್ತ ಸಾಲಿನ ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪುಸ್ತಕ, ಎಫ್‌ಐಡಿ ದಾಖಲೆಗಳೊಂದಿಗೆ ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಾಯಿಸಿಕೊಳ್ಳಬಹುದಾಗಿದೆ. ಈ ಬಗ್ಗೆ ತಾಂತ್ರಿಕ ದೋಷಗಳಿದ್ದಲ್ಲಿ ಸಮೀಪದ ಕೃಷಿ ಇಲಾಖೆಯನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು. ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

<><*<><>*><>

ಎಸ್.ಎಂ.ಸೆಹಗಲ್ ಫೌಂಡೇಶನ್ ವತಿಯಿಂದ ಜಲ ಸಂರಕ್ಷಣಾ ಯೋಜನೆಯಡಿ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲ್ಲೂಕಿನ ಹಂಚಾಳ, ವರದಾಪುರ, ಬೊಯನಹಳ್ಳಿ ಮತ್ತು ಬೆಗ್ಲಿ ಬೆಣಚಿನಹಳ್ಳಿ ಗ್ರಾಮಗಳ ಕೆರೆಗಳನ್ನು ಪುನರುಜ್ಜೀವನಗೊಳಿಸಲಾಗಿದೆ. ಯೋಜನೆಯಡಿ, ಕೆರೆಗಳ ಹೂಳನ್ನು ತೆಗೆಯುವುದರ ಮೂಲಕ ಅಂತರ್ಜಲ ವೃದ್ಧಿ ಮತ್ತು ಹೆಚ್ಚಿನ ಪ್ರಮಾಣದ ನೀರಿನ ಶೇಖರಣೆಗೆ ಅನುಕೂಲ ಮಾಡಿಕೊಡಲಾಗಿದೆ. ಕೆರೆಯ ಸುತ್ತಮುತ್ತಲಿನ ಕಾಡು ಪ್ರದೇಶವನ್ನು ಸ್ವಚ್ಛಗೊಳಿಸಲಾಗಿದ್ದು, ಗ್ರಾಮಸ್ಥರ ಸುರಕ್ಷತೆಗಾಗಿ ಸೌರ ವಿದ್ಯುತ್ ದೀಪಗಳನ್ನು ಅಳವಡಿಸಲಾಗಿದೆ.

<><*<><>*><>

ಹುಬ್ಬಳ್ಳಿಯ ಕೆಎಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಪ್ರಸಕ್ತ ಸಾಲಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದಲ್ಲಿ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡುತ್ತಿರುವ ಜಮ್ಮು-ಕಾಶ್ಮೀರ ತಂಡ ಇತ್ತೀಚಿನ ವರದಿ ಬಂದಾಗ ೨ ವಿಕೆಟ್ ನಷ್ಟಕ್ಕೆ ೧೭೪ ರನ್ ಗಳಿಸಿ ಆಡುತ್ತಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>